**All India Radio: Bangalore**
**Regional Bulletin In Kannada**
**23.03.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**23.03.2025 / 2.30 p.m.**
***************

ಮುಖ್ಯಾಂಶಗಳು

೧. ಸಾಮಾಜಿಕ ಸಾಮರಸ್ಯಕ್ಕಾಗಿ ಮಂಡಲ ಮಟ್ಟದಲ್ಲಿ ಸಾಮೂಹಿಕ ಸಂಪರ್ಕ ಕಾರ್ಯಕ್ರಮ - ಆರ್‌ಎಸ್‌ಎಸ್ ಸಹಕಾರಿವಾಹ ದತ್ತಾತ್ರೇಯ ಹೊಸಬಾಳೆ

೨. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ; ರಾಜ್ಯದ ರಾಜಕೀಯ ಬೆಳವಣಿಗೆ ಕುರಿತು ಚರ್ಚೆ

೩. ಹದಿನೆಂಟು ಬಿಜೆಪಿ ಶಾಸಕರ ಅಮಾನತು ಆದೇಶ ಪುನರ್ ಪರಿಶೀಲಿಸುವಂತೆ ವಿಧಾನಸಭಾಧ್ಯಕ್ಷರಿಗೆ ಸಿ.ಟಿ.ರವಿ ಆಗ್ರಹ

೪. ಬೆಂಗಳೂರು ನಗರದಲ್ಲಿ ಮಳೆ ಹಿನ್ನೆಲೆಯಲ್ಲಿ ಮೇಲ್ವಿಚಾರಣೆ ನಡೆಸುವಂತೆ ಅಧಿಕಾರಿಗಳಿಗೆ ಬಿಬಿಎಂಪಿ ಆಯುಕ್ತ ಸೂಚನೆ

***************

ರಾಷ್ಟ್ರೀಯ ಸ್ವಯಂಸೇವಕ ಸಂಘವು ತನ್ನ ಶತಮಾನೋತ್ಸವ ವರ್ಷದಲ್ಲಿ ಹಲವಾರು ಜನಸಂಪರ್ಕ ಕಾರ್ಯಕ್ರಮಗಳನ್ನು ಯೋಜಿಸಿದೆ.

ಬೆಂಗಳೂರಿನಲ್ಲಿ ಇಂದು ನಡೆದ ಅಖಿಲ ಭಾರತೀಯ ಪ್ರತಿನಿಧಿ ಸಭಾದ ಮೂರು ದಿನಗಳ ರಾಷ್ಟ್ರೀಯ ಸಭೆಯ ಸಮಾರೋಪದಲ್ಲಿ ಆರ್‌ಎಸ್‌ಎಸ್ ಸಹಕಾರಿವಾಹ ದತ್ತಾತ್ರೇಯ ಹೊಸಬಾಳೆ ಈ ವಿಷಯ ತಿಳಿಸಿದರು.

ವಿಜಯದಶಮಿ ದಿನದಂದು ವಿವಿಧ ಜನಸಂಪರ್ಕ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುವುದು. ಈ ಜನಸಂಪರ್ಕ ಕಾರ್ಯಕ್ರಮಗಳು ಸಮಾಜದ ಸುಧಾರಣೆಗಾಗಿ ವಿವಿಧ ಚಟುವಟಿಕೆಗಳಲ್ಲಿ ಸಾಮಾಜಿಕ ಭಾಗವಹಿಸುವಿಕೆಯನ್ನು ಬಯಸುತ್ತವೆ ಎಂದು ಅವರು ಹೇಳಿದರು.

ಸಾಮಾಜಿಕ ಸಾಮರಸ್ಯ ಮತ್ತು ರಾಷ್ಟ್ರೀಯ ಏಕತೆಯನ್ನು ಉತ್ತೇಜಿಸಲು ತಳಮಟ್ಟದಲ್ಲಿ ಮಂಡಲ ಮತ್ತು ಬಸ್ತಿ ಮಟ್ಟದಲ್ಲಿ ಸಾಮೂಹಿಕ ಸಂಪರ್ಕ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ದತ್ತಾತ್ರೇಯ ಹೊಸಬಾಳೆ ಮಾಹಿತಿ ನೀಡಿದರು.

ಔರಂಗಜೇಬ್ ಸಮಾಧಿ ಕುರಿತ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಔರಂಗಜೇಬ್ ಭಾರತೀಯ ನೀತಿ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಪ್ರತಿನಿಧಿಸುವುದಿಲ್ಲ. ಔರಂಗಜೇಬ್ ಐಕಾನ್ ಆಗಬಹುದೇ ಎಂಬುದನ್ನು ಸಮಾಜ ನಿರ್ಧರಿಸಬೇಕು ಎಂದು ಹೇಳಿದರು.

ಧರ್ಮಾಧಾರಿತ ಮೀಸಲಾತಿ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ದತ್ತಾತ್ರೇಯ ಹೊಸಬಾಳೆ, ಧರ್ಮಾಧಾರಿತ ಮೀಸಲಾತಿ ಸಾಂವಿಧಾನಿಕವಲ್ಲ ಮತ್ತು ಅನೇಕ ನ್ಯಾಯಾಲಯಗಳು ಅಂತಹ ಕ್ರಮವನ್ನು ತಿರಸ್ಕರಿಸಿವೆ ಎಂದು ಹೇಳಿದರು.

ಧ್ವನಿ: ದತ್ತಾತ್ರೇಯ ಹೊಸಬಾಳೆ

****************

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬೆಂಗಳೂರಿನಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಆರೋಗ್ಯ ವಿಚಾರಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೊಣಕಾಲು ನೋವಿನಿಂದ ಶೀಘ್ರವಾಗಿ ಚೇತರಿಸಿಕೊಳ್ಳುವಂತೆ ಅವರು ಹಾರೈಸಿದರು.

ಅಲ್ಲದೇ ಪ್ರಸ್ತುತ ರಾಜ್ಯದ ರಾಜಕೀಯದ ಬೆಳವಣಿಗೆ ಹಾಗೂ ವಿವಿಧ ಪಕ್ಷದ ವಿಚಾರಗಳ ಬಗ್ಗೆ ಚರ್ಚಿಸಿದರು.

ಈ ವೇಳೆ ಸಚಿವ ಪ್ರಿಯಾಂಕ್ ಖರ್ಗೆ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಹಾಜರಿದ್ದರು.

****************

ಸಚಿವರು, ಶಾಸಕರು ಸೇರಿ ೪೮ ಜನರ ಹನಿಟ್ರ್ಯಾಪ್ ಮಾಡಲಾಗಿದೆ ಎಂದು ಸಚಿವ ರಾಜಣ್ಣ ಅವರು ವಿಧಾನಸಭೆಯಲ್ಲಿ ಆರೋಪ ಮಾಡಿದ್ದಾರೆ. ಈ ವಿಷಯವನ್ನು ರಾಜ್ಯ ಸರ್ಕಾರ

ಗಂಭೀರವಾಗಿ ಪರಿಗಣಿಸಿ, ನ್ಯಾಯಾಂಗ ತನಿಖೆ ಅಥವಾ ಸಿ.ಬಿ.ಐ ತನಿಖೆಗೆ ಒಪ್ಪಿಸಬೇಕು ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಆಗ್ರಹಿಸಿದ್ದಾರೆ.

ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವರು ಸೇರಿ ವಿವಿಧ ರಾಜಕೀಯ ಮುಖಂಡರನ್ನು ಹನಿಟ್ರ್ಯಾಪ್ ಮಾಡಿ, ಬ್ಲಾಕ್‌ಮೇಲ್ ಮಾಡಲಾಗುತ್ತಿದೆ ಮತ್ತು ಈ ಮೂಲಕ ಅವರನ್ನು ತಮ್ಮ ಕಪಿಮುಷ್ಠಿಯಲ್ಲಿಟ್ಟುಕೊಳ್ಳಲು ಪ್ರಯತ್ನಿಸಲಾಗುತ್ತಿದೆ ಎಂದು ಸಚಿವ ರಾಜಣ್ಣ ಆರೋಪ ಮಾಡಿದ್ದಾರೆ. ಸರ್ಕಾರ ಈ ಆರೋಪವನ್ನು ಗಂಭೀವಾಗಿ ಪರಿಗಣಿಸಿ, ತನಿಖೆ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ವಿಷಯದ ಬಗ್ಗೆ ವಿಧಾನಸಭೆಯಲ್ಲಿ ಬಿಜೆಪಿ ಸದಸ್ಯರು ಹೋರಾಟ ಮಾಡಿದ್ದು, ನಮ್ಮ ಹೋರಾಟವನ್ನು ಸಕರಾತ್ಮಕವಾಗಿ ತೆಗೆದುಕೊಳ್ಳುವ ಬದಲು, ಹೋರಾಟವನ್ನು ಹತ್ತಿಕುವ ಉದ್ದೇಶದಿಂದ ೧೮ ಬಿಜೆಪಿ ಶಾಸಕರನ್ನು ೬ ತಿಂಗಳು ಅಮಾನತು ಮಾಡಿದ್ದಾರೆ. ಇದು ಪ್ರಜಾಪ್ರಭುತ್ವ ಒಪ್ಪುವಂತದಲ್ಲ. ವಿಧಾನಸಭಾಧ್ಯಕ್ಷರು ತಮ್ಮ ತೀರ್ಪನ್ನು ಪುನರ್ ಪರಿಶಿಲಸಬೇಕು ಎಂದು ಸಿ.ಟಿ.ರವಿ ಆಗ್ರಹಿಸಿದ್ದಾರೆ.

****************

ಮೈಸೂರಿನಲ್ಲಿ ತಾಪಮಾನ ಏರಿಕೆ ಹಿನ್ನೆಲೆಯಲ್ಲಿ ಜಿಲ್ಲಾ ಆರೋಗ್ಯ ಕಲ್ಯಾಣ ಇಲಾಖೆಯಿಂದ ಮುನ್ನೆಚ್ಚರಿಕೆ ಕ್ರಮ ವಹಿಸಲಾಗಿದ್ದು, ಈಗಾಗಲೇ ಎರಡು ಹಂತಗಳಲ್ಲಿ ಬೇಸಿಗೆ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದು ಮೈಸೂರು ಜಿಲ್ಲಾ ಆರೋಗ್ಯ ಕಲ್ಯಾಣ ಅಧಿಕಾರಿ ಡಾ.ಕುಮಾರಸ್ವಾಮಿ ತಿಳಿಸಿದ್ದಾರೆ.

ಈ ಕುರಿತು ಮಾತನಾಡಿದ ಅವರು, ಹೆಚ್ಚು ಬಿಸಿಲಿನ ಸಮಯದಲ್ಲಿ ಸಾರ್ವಜನಿಕರು ಓಡಾಟ ಕಡಿಮೆ ಮಾಡಬೇಕು. ದೇಹದ ನಿರ್ಜಲೀಕರಣ ಆಗದಂತೆ ಗಮನವಹಿಸಬೇಕು. ಸಾಧ್ಯವಾದಷ್ಟು ನೀರು ಸೇವಿಸಬೇಕು. ಬೇಸಿಗೆಯಲ್ಲಿ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಆಶಾ ಕಾರ್ಯಕರ್ತೆಯರು ಮನೆ-ಮನೆಗಳಿಗೆ ತೆರಳಿ, ಅರಿವು ಮೂಡಿಸುತ್ತಿದ್ದಾರೆ ಎಂದು ಹೇಳಿದರು.

****************

ಬೆಂಗಳೂರು ನಗರದಲ್ಲಿ ಮಳೆಯಾಗಿರುವ ಹಿನ್ನೆಲೆಯಲ್ಲಿ ಎಲ್ಲಾ ವಲಯ ಆಯುಕ್ತರು ಮೇಲ್ವಿಚಾರಣೆ ನಡೆಸಲು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸೂಚನೆ ನೀಡಿದ್ದಾರೆ.

ರಸ್ತೆ ಮೂಲಭೂತ ಸೌಕರ್ಯ ಮತ್ತು ಬೃಹತ್ ನೀರುಗಾಲುವೆ ವಿಭಾಗದ ಎಂಜಿನಿಯರ್‌ಗಳು ಹಾಗೂ ಅರಣ್ಯ ವಿಭಾಗದ ಸಿಬ್ಬಂದಿ, ತಕ್ಷಣವೇ ಪರಿಶೀಲನೆ ನಡೆಸಬೇಕು. ರಸ್ತೆಗಳಲ್ಲಿ ನೀರು ನಿಂತಿರುವ ಹಾಗೂ ಮರದ ಕೊಂಬೆಗಳನ್ನು ಕೂಡಲೆ ತೆರವುಗೊಳಿಸುವಂತೆ ನಿರ್ದೇಶಿಸಿದ್ದಾರೆ.

ವಾರ್ಡ್ ರಸ್ತೆಗಳು ಮತ್ತು ರಸ್ತೆ ಬದಿಯ ಚರಂಡಿಗಳನ್ನು ಸ್ವಚ್ಛವಾಗಿಡಬೇಕು. ಮಳೆಯಿಂದ ಸಮಸ್ಯೆಯಾಗಿರುವ ಪ್ರದೇಶಗಳಿಗೆ ಅಧಿಕಾರಿಗಳು ಭೇಟಿ ನೀಡಿ, ಇರುವ ಸಮಸ್ಯೆಯನ್ನು ಬಗೆಹರಿಸಬೇಕು. ಪಾಲಿಕೆಯ ಎಲ್ಲಾ ೮ ವಲಯಗಳ ನಿಯಂತ್ರಣ ಕೊಠಡಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ನಾಗರಿಕರಿಂದ ಬರುವ ದೂರುಗಳಿಗೆ ಕೂಡಲೇ ಸ್ಪಂದಿಸಿ, ಸಮಸ್ಯೆಯನ್ನು ಬಗೆಹರಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಸೂಚಿಸಿದ್ದಾರೆ.

ನಗರದಲ್ಲಿ ಮಳೆಯಿಂದ ಏನಾದರು ಸಮಸ್ಯೆಯಾಗಿದ್ದರೆ ಕೂಡಲೇ ಪಾಲಿಕೆಯ ಸಹಾಯವಾಣಿ ಸಂಖ್ಯೆ ೧೫೩೩ ಗೆ ಕರೆ ಮಾಡಿ ದೂರು ನೀಡಬಹುದು. ಇದರ ಜೊತೆಗೆ ಪಾಲಿಕೆಯ ೮ ವಲಯಗಳ ಸಹಾಯವಾಣಿ ಸಂಖ್ಯೆಗೆ ಕರೆ ಮಾಡಿ ದೂರು ನೀಡಬಹುದಾಗಿದೆ ಎಂದು ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

****************

ಚಿಕ್ಕಬಳ್ಳಾಪುರ ಜಿಲ್ಲಾ ಸರ್.ಎಂ.ವಿ.ಕ್ರೀಡಾಂಗಣವನ್ನು ಸುಮಾರು ೨೦ ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ಕ್ರೀಡಾ ವ್ಯವಸ್ಥೆಗಳೊಂದಿಗೆ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿನ ಸರ್.ಎಂ.ವಿ ಕ್ರೀಡಾಂಗಣಕ್ಕೆ ಯುವಜನ ಸೇವೆ ಮತ್ತು ಯುವ ಸಬಲೀಕರಣ ಇಲಾಖೆ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಜಿಲ್ಲಾ ಕ್ರೀಡಾಂಗಣಕ್ಕಾಗಿ ಈಗಾಗಲೇ ನೀಲಿನಕ್ಷೆ ಸಿದ್ಧಪಡಿಸಿದ್ದು, ಸಂಪನ್ಮೂಲ ಕ್ರೋಢೀಕರಣದತ್ತ ಚಿಂತನೆ ನಡೆಸಲಾಗುತ್ತಿದೆ. ಸರ್ಕಾರಿ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಬೇಕೇ ಅಥವಾ ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್ ನಂತಹ ಸಂಸ್ಥೆಗಳಿಗೆ ಜವಾಬ್ದಾರಿ ನೀಡಿ, ಅಭಿವೃದ್ಧಿಪಡಿಸಬೇಕೇ, ಇಲ್ಲವೇ ಸರ್ಕಾರಿ ಅನುದಾನದಲ್ಲೇ ಅಭಿವೃದ್ಧಿಪಡಿಸಬೇಕೇ ಎಂಬುದರ ಬಗ್ಗೆ ಚರ್ಚೆ ನಡೆಸಲಾಗುತ್ತಿದೆ ಎಂದು ವಿವರಿಸಿದರು.

ಸಿಂಥೆಟಿಕ್ ಟ್ರಾಕ್ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸಿ, ಕ್ರೀಡಾಂಗಣವನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು. ಸದ್ಯದಲ್ಲೇ ಕ್ರೀಡಾ ವಸತಿ ನಿಲಯವನ್ನು ಉದ್ಘಾಟಿಸಲಾಗುವುದು ಎಂದು ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದರು.

ಧ್ವನಿ: ಡಾ.ಎಂ.ಪಿ.ಸುಧಾಕರ್

****************

ದಾವಣಗೆರೆ ಜಿಲ್ಲೆಯಲ್ಲಿ ಭದ್ರಾ ನಾಲೆಗಳಿಗೆ ಅಳವಡಿಸಿರುವ ಅಕ್ರಮ ಪಂಪ್ ಸೆಟ್‌ಗಳ ತೆರವು ಕಾರ್ಯಾಚರಣೆ ಚುರುಕುಗೊಂಡಿದೆ.

ಜಿಲ್ಲಾಧಿಕಾರಿಗಳ ಸೂಚನೆ ಮೇರೆಗೆ ಮಲೇಬೆನ್ನೂರು ಭಾಗದಲ್ಲಿ ೨೦ಕ್ಕೂ ಅಧಿಕ ಅಕ್ರಮ ಪಂಪ್‌ಸೆಟ್‌ಗಳನ್ನು ಟಾಸ್ಕ್‌ಫೋರ್ಸ್ ಸಮಿತಿ ವಶಪಡಿಸಿಕೊಂಡಿದೆ. ಪೊಲೀಸರು ಮತ್ತು ಸ್ಥಳಿಯ ಅಧಿಕಾರಿಗಳ ಸಮ್ಮುಖದಲ್ಲಿ ಪಂಪ್‌ಸೆಟ್‌ಗಳ ತೆರವು ಕಾರ್ಯಾಚರಣೆ ನಡೆದಿದೆ ಎಂದು ನಾಲಾ ಅಧೀಕ್ಷಕ ಅಭಿಯಂತರ ಕೃಷ್ಣಮೂರ್ತಿ ತಿಳಿಸಿದ್ದಾರೆ.

ನಾಲೆಗಳ ಕೊನೆಭಾಗದ ಅಚ್ಚುಕಟ್ಟು ಪ್ರದೇಶಗಳಿಗೆ ನೀರು ಸರಬರಾಜು ಆಗುತ್ತಿಲ್ಲ ಎಂದು ರೈತರು ಸಲ್ಲಿಸಿದ ದೂರಿನ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ರಚಿಸಿದ್ದ ಟಾಸ್ಕ್ ಫೋರ್ಸ್ ಸಮಿತಿಯಿಂದ ಅಕ್ರಮ ಪಂಪ್ ಸೆಟ್‌ಗಳ ತೆರವು ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

****************

ಸರ್ಕಾರಿ ಯೋಜನೆಗಳ ಸವಲತ್ತನ್ನು ಕಾರ್ಮಿಕರು ಪರಿಣಾಮಕಾರಿಯಾಗಿ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ಹೇಳಿದ್ದಾರೆ.

ಮಂಡ್ಯದಲ್ಲಿ ನಿರ್ಮಿಸಲಾಗಿರುವ ನೂತನ ಕಾರ್ಮಿಕ ಭವನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

********ಮುಕ್ತಾಯ********